ಕರ್ನಾಟಕ ಸರ್ಕಾರ
ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾಮಟ್ಟದ ಸಮಾಜ ಕಲ್ಯಾಣ ಇಲಾಖೆಯ
'ಡಿ' ವೃಂದದ ಹುದ್ದೆಗಳ ನೇರ ನೇಮಕಾತಿ ಪ್ರಾಧಿಕಾರಿಗಳ ಕಾರ್ಯಾಲಯ ಹಾಸನ
ಡಾ:ಬಿ.ಆರ್.ಅಂಬೇಡ್ಕರ್ ಭವನ, ಉಪ ನಿರ್ದೇಶಕರ ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಹಾಸನ-573201
E-Mail:dswohassan@gmail.com ☎ Phone No:08172-268960

ಸಂ/ಜಿಸಕಅ/ಡಿ3/ಸಿಬ್ಬಂದಿ/ಸಿಆರ್36/16-17 ದಿನಾಂಕ:19-8-2017

## ಅಧಿಸೂಚನೆ

ವಿಷಯ:-ಹಾಸನ ಜಿಲ್ಲೆ, ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್ 'ಡಿ' ವೃಂದದ ಕಾವಲುಗಾರರ ಹುದ್ದೆಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ:1)ಸರ್ಕಾರಿ ಆದೇಶದ ಸಂಖ್ಯೆ:ಸಕಇ 268 ಪಕಸೇ 2016 ದಿ:29-9-2016.
2)ಜಿಲ್ಲಾಧಿಕಾರಿಗಳು, ಹಾಸನ ರವರ ಇದೇ ಸಮಸಂಖ್ಯೆ ಅಧಿಸೂಚನೆ ದಿ:20-10-16.
3)ಸರ್ಕಾರಿ ಆದೇಶ ಸಂ/ಸಕಇ/268/ಪಕಸೇ/2015(ಭಾಗ-1) ದಿ:28-6-2017.
4)ದಿ:3-8-2017 ರಂದು ಜಿಲ್ಲಾಧಿಕಾರಿಗಳು, ಹಾಸನ ಹಾಗೂ ಅಧ್ಯಕ್ಷರು, ಜಿಲ್ಲಾ ಮಟ್ಟದ 'ಡಿ' ವೃಂದದ ನೇಮಕಾತಿ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

***********

ಹಾಸನ ಜಿಲ್ಲೆ, ಸಮಾಜ ಕಲ್ಯಾಣ ಇಲಾಖೆಯಲ್ಲಿನ 'ಡಿ' ವೃಂದದ ಕಾವಲುಗಾರ ಹುದ್ದೆ ನೇರ ನೇಮಕಾತಿಗೆ ಸಂಬಂಧಿಸಿದಂತೆ, ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರು ಆದೇಶ ಸಂ/ಸಕಇ/268/ ಪಕಸೇ2015 ದಿ:29-9-16 ರಲ್ಲಿ ಸೂಚಿಸಿರುವಂತೆ ದಿ:20-10-2016ರಲ್ಲಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಸರ್ಕಾರದ ದಿನಾಂಕ 3-6-2017 ಮತ್ತು ದಿ:9-6-2017ರ ಆದೇಶಗಳ ರೀತ್ಯ ಅಡುಗೆ ಸಹಾಯಕರ ಹುದ್ದೆಗಳಿಗೆ ಕಡೆಯ ದಿನಾಂಕದವರೆಗೆ ಸ್ವೀಕೃತವಾದ ಒಟ್ಟು ಅರ್ಜಿಗಳಲ್ಲಿ 1:5 ಅನುಪಾತದ ಪ್ರಮಾಣದಲ್ಲಿ ಪರಿಶೀಲನಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸಲಾಗಿರುತ್ತದೆ.

1:5 ಅನುಪಾತದ ಪ್ರಮಾಣದ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆಯನ್ನು ದಿನಾಂಕ 24-6-2017 ರಂದು ಪರಿಶೀಲನೆ ನಡೆಸಲಾಗಿ, ದಾಖಲಾತಿ ಪರಿಶೀಲನೆಗೆ ಹಾಜರಾಗಿದ್ದ ಒಟ್ಟು 78 ಅಭ್ಯರ್ಥಿಗಳ ಪೈಕಿ ದಾಖಲಾತಿ ಸರಿಯಿರುವ 74 ಅಭ್ಯರ್ಥಿಗಳನ್ನು ಮುಂದಿನ ಹಂತಕ್ಕೆ ಪರಿಗಣಿಸಲು ದಾಖಲಾತಿ ಪರಿಶೀಲನೆಗೆ ಗೈರು ಹಾಜರಾದ ಅಭ್ಯರ್ಥಿಗಳ ಪಟ್ಟಿಯನ್ನು ಮತ್ತು ದಾಖಲಾತಿ ಸರಿಯಿಲ್ಲದೆ ತಿರಸ್ಕರಿಸಿದ 4 ಅಭ್ಯರ್ಥಿಗಳನ್ನು ಹೊರತುಪಡಿಸಿ 1:3 ಅನುಪಾತದ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ದಿ:28-6-2017ರಂದು ಪ್ರಕಟಿಸಲಾಗಿರುತ್ತದೆ. 1:3 ಅನುಪಾತದಲ್ಲಿ ಆಯ್ಕೆಯಾಗಿದ್ದ 74 ಅಭ್ಯರ್ಥಿಗಳಿಗೆ ದಿ:6-7-2017 ರಂದು ದೈಹಿಕ ದಾರ್ಢ್ಯತೆ ಪರೀಕ್ಷೆಯನ್ನು ನಡೆಸಲಾಗಿರುತ್ತದೆ. ದೈಹಿಕ ದಾರ್ಢ್ಯತೆ ಪರೀಕ್ಷೆಯಲ್ಲಿ 11 ಅಭ್ಯರ್ಥಿಗಳು ಗೈರು ಹಾಜರಾಗಿದ್ದು, 44 ಅಭ್ಯರ್ಥಿಗಳು ಅನರ್ಹಗೊಂಡು, 19 ಅಭ್ಯರ್ಥಿಗಳು ದೈಹಿಕ ದಾರ್ಢ್ಯತೆ ಪರೀಕ್ಷೆಯಲ್ಲಿ ಆಯ್ಕೆಯಾಗಿರುತ್ತಾರೆ. ಸದರಿ 19 ಅಭ್ಯರ್ಥಿಗಳ ಪೈಕಿ ಮೆರಿಟ್ ಮತ್ತು ಮೀಸಲಾತಿ ಆಧಾರದ ಮೇಲೆ 1:1 ಅನುಪಾತದ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ದಿ:12-7-2017 ರಂದು ಪ್ರಕಟಿಸಲಾಗಿರುತ್ತದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ನಿಗದಿತ ದಿನಾಂಕದೊಳಗೆ ಬಂದಿದ್ದ ಆಕ್ಷೇಪಣೆಗಳ ಬಗ್ಗೆ ದಿ:3-8-2017 ರಂದು ನಡೆದ ಸಭೆಯಲ್ಲಿ ಚರ್ಚಿಸಲಾಗಿ ದೈಹಿಕ ದಾರ್ಢ್ಯತೆ ಪರೀಕ್ಷೆಯ ಎಲ್ಲಾ ವಿಭಾಗಗಳಲ್ಲಿ ಉತ್ತೀರ್ಣರಾಗಿ ಎದೆ ಉಬ್ಬಿಸುವಿಕೆಯಲ್ಲಿ ಆಯ್ಕೆಯಾಗದಿದ್ದ 10 ಅಭ್ಯರ್ಥಿಗಳಿಗೆ ಮತ್ತು ಕಡಿಮೆ ಅಂತರದ ತೂಕದಿಂದ ಆಯ್ಕೆಯಾಗದಿದ್ದ ಒಬ್ಬ ಮಹಿಳಾಅಭ್ಯರ್ಥಿಗೆ ಮತ್ತೊಮ್ಮೆ ಅಳತೆ ಮಾಡಲು ತೀರ್ಮಾನಿಸಿದಂತೆ ದಿ:11-8-17 ರಂದು ಪುರುಷ ಅಭ್ಯರ್ಥಿಗಳಿಗೆ ಎದೆ ಸುತ್ತಳತೆ ಮತ್ತು ಒಬ್ಬರು ಮಹಿಳಾ ಅಭ್ಯರ್ಥಿಗೆ ತೂಕದ ಅಳತೆ ಮಾಡಿ ದೈಹಿಕ ದಾರ್ಢ್ಯತೆ ಪರೀಕ್ಷೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳನ್ನು ಪರಿಗಣಿಸಿ ಪರಿಷ್ಕೃತ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿ:11-8-2017 ರಂದು ಪ್ರಕಟಿಸಲಾಗಿರುತ್ತದೆ. ನಿಗದಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಬಂದಿರುವುದಿಲ್ಲ. ಆದ್ದರಿಂದ ಕೆಳಕಂಡ ನೇಮಕಾತಿ ಷರತ್ತುಗಳಿಗೊಳಪಟ್ಟು 28 ಅಭ್ಯರ್ಥಿಗಳ ಅಂತಿಮ ಆಯ್ಕೆ ಪಟ್ಟಿಯನ್ನು ಈ ಅಧಿಸೂಚನೆಯಲ್ಲಿ ಪ್ರಕಟಿಸಲಾಗಿರುತ್ತದೆ.

**ಷರತ್ತುಗಳು:**

1. ನೇಮಕಾತಿ ಸಮಯದಲ್ಲಿ ಅಭ್ಯರ್ಥಿಯು ನೇಮಕಾತಿಗೆ ಅನರ್ಹರೆಂದು ಕಂಡು ಬಂದಲ್ಲಿ, ನೇಮಕಾತಿಯನ್ನು ಯಾವುದೇ ಸೂಚನೆಯನ್ನು ನೀಡದೆ ರದ್ದುಪಡಿಸಲಾಗುವುದು.
2. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಗ್ರಾಮೀಣ, ಯೋಜನಾ ನಿರಾಶ್ರಿತ, ಕನ್ನಡ ಮಾಧ್ಯಮ, ಮಾಜಿ ಸೈನಿಕ ಮತ್ತು ಅಂಗವಿಕಲ ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ನೇಮಕಾತಿಯು ಸದರಿ ಪ್ರಮಾಣ ಪತ್ರಗಳ ಬಗ್ಗೆ ಸಕ್ಷಮ ಪ್ರಾಧಿಕಾರಗಳಿಂದ ಸಿಂಧುತ್ವ ಪರಿಶೀಲನೆಗೆ ಒಳಪಟ್ಟಿರುತ್ತದೆ.
3. ಅಭ್ಯರ್ಥಿಗಳ ವಿರುದ್ಧ ಯಾವುದೇ ಕ್ರಿಮಿನಲ್ ಮೊಕದ್ದಮೆ ಇರುವುದಿಲ್ಲವೆಂದು ಹಾಗೂ ಒಳ್ಳೆಯ ನಡತೆ ಮತ್ತು ಪೂರ್ವ ಚರಿತ್ರೆ ಹೊಂದಿರುವ ಬಗ್ಗೆ ಪೊಲೀಸ್ ಇಲಾಖೆಯಿಂದ ದೃಢೀಕರಣ ಪತ್ರವನ್ನು ಪಡೆಯುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಅಭ್ಯರ್ಥಿಯು ಸಲ್ಲಿಸುವ ಮೂಲ ದಾಖಲಾತಿಗಳಲ್ಲಿ ತಪ್ಪು ಮಾಹಿತಿ ಇದ್ದಲ್ಲಿ ಅಥವಾ ಸದರಿ ದಾಖಲೆ ಸುಳ್ಳು ಎಂದು ಕಂಡು ಬಂದಲ್ಲಿ ಯಾವುದೇ ಸೂಚನೆ ನೀಡದೆ ಅಂತಹವರ ಆಯ್ಕೆಯನ್ನು ರದ್ದುಪಡಿಸಲಾಗುವುದು.
5. ಅಭ್ಯರ್ಥಿಯು ನೇಮಕಾತಿ ಆದೇಶ ತಲುಪಿದ 15 ದಿನಗಳೊಳಗೆ ತಮ್ಮ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಸಂಬಂಧಿಸಿದ ತಹಸೀಲ್ದಾರರ ಸಮಕ್ಷಮದಲ್ಲಿ ವರದಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವೆ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 18 ರನ್ವಯ ನೇಮಕಾತಿಯನ್ನು ರದ್ದುಪಡಿಸಲಾಗುವುದು.
6. ಶೇಕಡವಾರು ಅಂಕಗಳು ಒಂದೇ ಇದ್ದಂತಹ ಅಭ್ಯರ್ಥಿಗಳ ಪೈಕಿ ನಿಯಮಾನುಸಾರ ವಯಸ್ಸಿನಲ್ಲಿ ಹಿರಿಯರಾದ ಅಭ್ಯರ್ಥಿಯನ್ನು ಆಯ್ಕೆ ಮಾಡಿದೆ.

ಅಧ್ಯಕ್ಷರು,
ಸಮಾಜ ಕಲ್ಯಾಣ ಇಲಾಖೆ 'ಡಿ' ವೃಂದದ ಹುದ್ದೆಗಳ
ನೇರ ನೇಮಕಾತಿ ಪ್ರಾಧಿಕಾರ, ಮತ್ತು ಜಿಲ್ಲಾಧಿಕಾರಿಗಳು,
ಹಾಸನ ಜಿಲ್ಲೆ, ಹಾಸನ.